**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.1584/2023.</u>**

ಪಿರ್ಯಾದುದಾರರುಃ- ಹರಿಶ್ಚಂದ್ರ ದುರ್ಗು ಅಂಬಿಗ,
ವಯಸ್ಸು ಸುಮಾರು 36 ವರ್ಷ,
ಸಾಕೀನಃ ಹೈಗುಂದ,
ಅಂಚೆಃ ಹೆರಂಗಡಿ,
ತಾಲೂಕುಃ ಹೊನ್ನಾವರ, (ಉ.ಕ).

**-ವಿರುಧ್ಧ-**

ಆರೋಪಿಯ ಹೆಸರುಃ- ಸಚಿನ್ ವೆಂಕಟೇಶ ಅಂಬಿಗ,
ವಯಸ್ಸು ಸುಮಾರು 33 ವರ್ಷ,
ಸಾಕೀನಃ- ಹುಂಜಿಮಕ್ಕಿ,
ಪೋಸ್ಟಃ ಕುದ್ರಗಿ,
ತಾಲೂಕುಃ- ಹೊನ್ನಾವರ, (ಉ.ಕ.).

**<u>ಆಪಾದನೆ</u>**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಬಿ.ಬಿ.ಎ.,ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯಾದ ನೀವು ಪಿರ್ಯಾದಿಯವರ ಹತ್ತಿರ ಬೋಟ್ ಕೆಲಸದ ಕುರಿತು ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಬಳಕೂರು** ಶಾಖೆಯ ಚೆಕ್ ನಂ.236697 ನ್ನು ದಿನಾಂಕ 31-10-2023 ರಂದು ರೂ. 85,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಭಾರತೀಯ ಸ್ಟೇಟ್ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Drawers

Signature Differs' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 04-11-2023 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 10-11-2023 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 20-11-2023 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕಃ- 18-07-2025.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ., ಯವರ ನ್ಯಾಯಾಲಯ., ಹೊನ್ನಾವರ.**

ಆರೋಪಿಯ ಸಹಿಃ- ಸಹಿ ಇದೆ

****